**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.1/2022

**PW**. 8

**CW**. 16

**ಸಾಕ್ಷಿಯ ಹೆಸರು –ವಿಜೇಯೆಂದ್ರ ಪಿ ಟಿ**

**ತಂದೆಯ ಹೆಸರು –ಲೇ ತಿಮ್ಮಯ್ಯ**

**ವಯಸ್ಸು –64 ವರ್ಷಗಳು**

ದಿನಾಂಕ 11–11–2025 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ನಿವೃತ್ತ ಪಿ ಎಸ್ ಐ**

**ವಾಸಸ್ಥಳ –ಕುಶಾಲನಗರ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ನಾನು ಜನವರಿ 2014 ರಿಂದ ಆಗಸ್ಟ 2019 ರವರೆಗೆ ಬೈಲುಕುಪ್ಪೆ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಸೇವೆ ಸಲ್ಲಿಸಿದ್ದೇನೆ.

ದಿಃ 29–06–2019 ರಂದು ನಾನು ಠಾಣಾ ಕರ್ತವ್ಯದಲ್ಲಿರುವಾಗ ಸಂಜೆ 6.30 ಗಂಟೆಗೆ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದು, ನಮ್ಮ ಠಾಣಾ ಮೊ ಸಂ 53/2019 ರಂತೆ ಪ್ರಕರಣ ದಾಖಲು ಮಾಡಿಕೊಂಡು ಪ್ರ ವ ವ ಯನ್ನು ನ್ಯಾಯಾಲುಕ್ಕೆ ವತ್ತು ನಮ್ಮ ಮೇಲಾಧಿಕಾರಿಗಳಿಗೆ ಕಳುಹಿಸಿರುತ್ತೇನೆ. ಸದರಿ ದೂರನ್ನು ಈಗಾಗಲೇ ನಿಪಿ–6 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ–6(ಬಿ) ಎಂದು ಗುರುತಿಸಲಾಯಿತು. ಪ್ರ ವ ವ ಯನ್ನು ನಿಪಿ–7 ಎಂದು ಸಾಕ್ಷಿಯ ಸಹಿಯನ್ನು ನಿಪಿ–7(ಎ) ಎಂದು ಗುರುತಿಸಲಾಯಿತು.

ಚಾಸಾ–1 ರವರು ಕೃತ್ಯ ನಡೆದ ಸ್ಥಳದಲ್ಲಿ ಸಂಗ್ರಹಿಸಿದ್ದ ಸ್ಫೋಟಕ ವಸ್ತುಗಳನ್ನು ನನ್ನ ಮುಂದೆ ಹಾಜರು ಮಾಡಿದ್ದು , ಅವುಗಳನ್ನು ಜಪ್ತಿ ಮಾಡಿ , ಚಾಸಾ– 4 ಮತ್ತು 5 ರವರ ಸಮಕ್ಷಮ ಸಂಜೆ

7.15 ರಿಂದ 8.15 ರವರೆಗೆ ಪಂಚನಾಮೆ ಮಾಡಿರುತ್ತೇನೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಅದೇ ಸಮಯದಲ್ಲಿ ಚಾಸಾ-2 ರಿಂದ 5 ರವರ ಹೇಳಿಕೆ ಪಡೆದಿದ್ದೇನೆ.

ದಿಃ 01-07-2019 ರಂದು ಚಾಸಾ-1 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಮಧ್ಯಾಹ್ನ 12.30 ರಿಂದ 1.15 ರವರೆಗೆ ಚಾಸಾ-6 ಮತ್ತು 7 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತೇನೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ನಿಪಿ-2 ರ ಪಂಚನಾಮೆ ಕಾಲಕ್ಕೆ ಜಪ್ತಿ ಮಾಡಿದ ಸ್ಫೋಟಕ ವಸ್ತುಗಳನ್ನು ನಿಪಿ-1 ರ ಫೋಟೋದಲ್ಲಿ ನೋಡಿ ಗುರುತಿಸುತ್ತೇನೆ.

ನಂತರ ಪ್ರಕರಣದ ತನಿಖೆಯನ್ನು ಎ ಎಸ್ ಐ ಶಿವರಾಜುರವರಿಗೆ ವಹಿಸಿರುತ್ತೇನೆ.

**<u>ಪಾಟೀಸವಾಲುಃ- ಆರೋಪಿ ಪರ ಶ್ರೀ ಕೆ ಸಿ ಬಿ ವಕೀಲರಿಂದಃ-</u>**

ಚಾಸಾ-1 ರವರು ಠಾಣೆಗೆ ಬಂದು ದೂರು ನೀಡಿಲ್ಲ ಎಂದರೆ ಸರಿಯಲ್ಲ. ಪಂಚರ ಸಮಕ್ಷಮ ಯಾವುದೇ ಪಂಚನಾಮೆಗಳನ್ನು ಮಾಡಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಅವರ ಹೇಳಿಕೆಯಂತೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಕೃತ್ಯ ಮಾಡಿದಿದ್ದರೂ ಕೂಡ ಅಂಕಿ ಅಂಶಗಳಿಗೋಸ್ಕರ ಸುಳ್ಳು ಪ್ರಕರಣ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಕೃತ್ಯ ನಡೆದ ಸ್ಥಳಕ್ಕೆ ಹೋಗಿಲ್ಲ ಹಾಗೂ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಗಳನ್ನು ಠಾಣೆಯಲ್ಲಿ ಬರೆದಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರ ಫೋಟೋವನ್ನು ನಮ್ಮ ಅನೂಕೂಲಕ್ಕೆ ತಕ್ಕಂತೆ ಸೃಷ್ಟಿ ಮಾಡಿದ್ದೇನೆ ಎಂದರೆ

ಸರಿಯಲ್ಲ. ನಮ್ಮ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.